## ಕರ್ನಾಟಕ ವಿಧಾನ ಪರಿಷತ್

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ ಇವರ ನಿಯಮ-330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ:

**ವಿಷಯ:-2010 ರಿಂದ 2020 ನೇ ಸಾಲಿನ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಪತ್ರಾಂಕಿತ ಹುದ್ದೆಗಳಿಗೆ ಬಡ್ತಿ ನೀಡಲು ನಿಯಮಾವಳಿಗಳ ಅನ್ವಯ ಇಲಾಖಾ ಬಡ್ತಿ ಸಭೆಯಲ್ಲಿ ಕಾನೂನು ಬದ್ಧವಾದ ಜೇಷ್ಠತಾ ಪಟ್ಟಿಯನ್ನು ಪರಿಗಣಿಸದೆ, ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದ ಕೆಲವು ನೌಕರರುಗಳಿಗೆ ಸಹಾಯಕ ನಿರ್ದೇಶಕರ, ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ ಹಾಗೂ ಉಪ ಕಾರ್ಯದರ್ಶಿ ಹುದ್ದೆಗಳಿಗೆ ಮುಂಬಡ್ತಿ ನೀಡಿರುವ ಬಗ್ಗೆ.**

---

ಸರ್ಕಾರವು ಅಧಿಸೂಚನೆ ಸಂಖ್ಯೆ: ಗ್ರಾಅಪ 316 ಗ್ರಾಪಂಕಾ 2009, ದಿನಾಂಕ:04.3.2010 ರಂದು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಸರ್ಕಾರ ಶಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು-2009ನ್ನು ರಚಿಸಿದ್ದು, ಸದರಿ ನಿಯಮಗಳಲ್ಲಿ ನೇಮಕಾತಿ ವಿಧಾನದ ಭಾಗದಲ್ಲಿ **"ವಿಸ್ತರಣಾಧಿಕಾರಿ (ಪಂಚಾಯಿತಿ) ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವಾ ನಿಯಮ 43ರ ಅನುಸಾರ ಒಂದು ಬಾರಿಯ ಕ್ರಮವಾಗಿ ಬಡ್ತಿ ಕೋಟಾದ ಎದುರಿಗೆ ವಿಲೀನಗೊಳಿಸುವ ಮೂಲಕ, ಅಂತಹ ಸಂದರ್ಭದಲ್ಲಿ ವಿಸ್ತರಣಾಧಿಕಾರಿ (ಪಂಚಾಯಿತಿ) ವೃಂದ ರದ್ದುಗೊಳ್ಳತಕ್ಕದ್ದು"** ಎಂದು ತಿಳಿಸಲಾಗಿದೆ. ಅದರಂತೆ ಬಡ್ತಿ ಕೋಟಾದಡಿ ಲಭ್ಯವಾದ ಶೇಕಡ 33 % ರಷ್ಟು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಎದುರಿಗೆ ಹಾಲಿ ಕಾರ್ಯನಿರ್ವಹಿಸುತ್ತಿದ್ದ ಪಂಚಾಯತಿ ವಿಸ್ತರಣಾಧಿಕಾರಿಗಳು ವಿಲೀನಗೊಂಡಿದ್ದಾರೆ.

ಅಧಿಸೂಚನೆ ಸಂಖ್ಯೆ:ಗ್ರಾಅಪ 216 ಗ್ರಾಪಂಕಾ, ದಿ:30.04.2011ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತಿ ವಿಸ್ತರಣಾಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ:01.01.2010 ರಲ್ಲಿದ್ದಂತೆ ಪ್ರಕಟಿಸಲಾಗಿರುತ್ತದೆ.

ಅಧಿಸೂಚನೆ ಸಂಖ್ಯೆ: ಗ್ರಾಅಪ 17 ಪಬವ 2005, ದಿನಾಂಕ:11.7.2011ರಲ್ಲಿ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು

ನೇಮಕಾತಿ) (ಮೊದಲನೇ ತಿದ್ದುಪಡಿ) ನಿಯಮಗಳನ್ನು ರಚಿಸುವ ಮೂಲಕ ಅಂದು ಅಸ್ತಿತ್ವದಲ್ಲಿದ್ದ ಪ್ರತಿ ತಾಲ್ಲೂಕು ಪಂಚಾಯತಿಗೆ ತಲಾ ಒಂದು ಹುದ್ದೆಯಂತೆ ಒಟ್ಟು 176 ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ಹುದ್ದೆಗಳಿಗೆ ನೇಮಕಾತಿ ನಿಯಮಗಳನ್ನು ರಚಿಸಿದ್ದು, ಅದರನುಸಾರ ಶೇ 100% ರಷ್ಟು ಹುದ್ದೆಗಳನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

2011 ರಿಂದ 2018ರ ವರೆಗೆ ಇಲಾಖಾ ಮುಂಬಡ್ತಿ ಸಮಿತಿ ಸಭೆಗಳ ನಿರ್ಣಯಗಳನುಸಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸಹಾಯಕ ನಿರ್ದೇಶಕ (ಗ್ರಾ.ಉ) ಹುದ್ದೆಗೆ ಪದನ್ನೋತಿ ನೀಡಲಾಗಿದೆ. ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ಹುದ್ದೆಗೆ **ಇಲಾಖಾ ಪರೀಕ್ಷೆಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧಿಸೂಚನೆ ಸಂಖ್ಯೆ:ಡಿಪಿಎಆರ್/4/ಎಸ್.ಎಸ್.ಆರ್/2009, ದಿನಾಂಕ:23.12.2011ರಲ್ಲಿ ನಿಗಧಿಪಡಿಸಿದ್ದು, ಕರ್ನಾಟಕ ನಾಗರೀಕ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳಯ 1957 ರ ನಿಯಮ 4(2)(ಬಿ)ರ ಅನುಸಾರ ಇಲಾಖಾ ಪರೀಕ್ಷೆಗಳನ್ನು ನಿಗಧಿಪಡಿಸಿದ ದಿನಾಂಕದಿಂದ 03 ವರ್ಷಗಳ ಕಾಲಾವಕಾಶವಿರುತ್ತದೆ. ಅದರಂತೆ ದಿನಾಂಕ:23.12.2011 ರಿಂದ ಮೂರು ವರ್ಷಗಳಲ್ಲಿ ನಿಗಧಿತ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗದಿದ್ದರೂ, ಮುಂಬಡ್ತಿಗೆ ಇನ್ನಿತರ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳಿಗೆ ಮುಂಬಡ್ತಿಗೆ ಪರಿಗಣಿಸಲು ಅವಕಾಶ ಇರುತ್ತದೆ. ಅದರಂತೆ, ನಿಯಮಗಳಲ್ಲಿನ ಅವಕಾಶ ಪಡೆದುಕೊಂಡು ಸಹಾಯಕ ನಿರ್ದೇಶಕ (ಗ್ರಾ.ಉ) ಹುದ್ದೆಗೆ ಮುಂಬಡ್ತಿ ಪಡೆದಿರುತ್ತಾರೆ.**

ಆದ್ಯಾಗ್ಯೂ, ನಿಗಧಿತ ಕಾಲಾವಧಿಯು ಪೂರ್ಣಗೊಂಡ ನಂತರ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾದ ಪ್ರಕರಣಗಳಲ್ಲಿ ಉತ್ತೀರ್ಣವಾದ ದಿನಾಂಕವನ್ನು ಸಹಾಯಕ ನಿರ್ದೇಶಕ(ಗ್ರಾ.ಉ) ಹುದ್ದೆಗೆ ಮುಂಬಡ್ತಿಗೆ **ಅರ್ಹತಾ** ದಿನಾಂಕವೆಂದು ಜೇಷ್ಠತಾ ಪಟ್ಟಿಯಲ್ಲಿ ನಿಗಧಿಪಡಿಸಲಾಗಿದೆ. ಇದರಲ್ಲಿ ಕಾನೂನು ಉಲ್ಲಂಘನೆ ಆಗಿರುವುದಿಲ್ಲ.

ದಿನಾಂಕ:21.2.2014ರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಪ್ರಶ್ನಿಸಿ, ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ದಾಖಲಾಗಿದ್ದ ಅರ್ಜಿ ಸಂಖ್ಯೆ:2259-2261/2014 ಹಾಗೂ ತತ್ಸಬಂಧಿತ ಅರ್ಜಿಗಳಲ್ಲಿ ಮಾನ್ಯ ಕೆ.ಎ.ಟಿಯು ದಿನಾಂಕ:18.3.2019 ರಂದು ತೀರ್ಪು ನೀಡಿ, ದಿ:21.2.2014ರ ಜೇಷ್ಠತಾ ಪಟ್ಟಿಯನ್ನು ರದ್ದುಗೊಳಿಸಿದ್ದರಿಂದ, ನಂತರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸಹಾಯಕ ನಿರ್ದೇಶಕ (ಗ್ರಾ.ಉ) ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ

ಕ್ರಮವಹಿಸಿರುವುದಿಲ್ಲ. ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ತೀರ್ಪನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳು ದಾಖಲಾಗಿದ್ದು, ಸದರಿ ರಿಟ್ ಅರ್ಜಿಗಳಲ್ಲಿನ ಅಂತಿಮ ತೀರ್ಪಿಗೆ ಒಳಪಟ್ಟು ಮುಂಬಡ್ತಿ ವಂಚಿತರಾದ ಅರ್ಹ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಪೂರ್ವಾನ್ವಯ ಪ್ರಕರಣಗಳು ಮತ್ತು ಮುಚ್ಚಿದ ಲಕೋಟೆಯಲ್ಲಿ ದೋಷಮುಕ್ತಗೊಂಡ ಪ್ರಕರಣಗಳಿಗೆ ಮಾತ್ರ ಮುಂಬಡ್ತಿಗೆ ಕ್ರಮವಹಿಸಲಾಗಿದೆ.

ನಿಯಮಾನುಸಾರ ಕಾಲ ಕಾಲಕ್ಕೆ ಪರಿಷ್ಕೃತಗೊಂಡ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಆಧರಿಸಿ, ಸೇವಾ ಜೇಷ್ಠತೆ, ರೋಷ್ಟರ್ ಅನ್ವಯ ಲಭ್ಯವಾದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಅರ್ಹತೆಯನ್ನು ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಮಂಡಿಸಿ, ಸಮಿತಿ ಸಭೆಯ ಶಿಫಾರಸ್ಸಿನ ಅನುಸಾರ ಮುಂಬಡ್ತಿ ಪ್ರಕ್ರಿಯೆಗಳನ್ನು ಕೈಗೊಳ್ಳಲಾಗಿದೆ. ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಮತ್ತು ಉಪ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ನೀಡುವ ಸಂದರ್ಭದಲ್ಲಿ ನಿಗಧಿತ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗದ ಯಾವುದೇ ಅಧಿಕಾರಿಗಳನ್ನು ಮುಂಬಡ್ತಿಗೆ ಪರಿಗಣಿಸಿರುವುದಿಲ್ಲ.

**(ಗ್ರಾಅಪ 30 ಕೆ.ಎಸ್.ಎಸ್ 2021(ಇ))**

**(ಕೆ.ಎಸ್.ಈಶ್ವರಪ್ಪ)**

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು**

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು